**ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಬಿ.ಎಂ. ಫಾರೂಖ್ ಇವರು ನಿಯಮ-72ರಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಉತ್ತರ**

**ಪ್ರಶ್ನೆ:**

ಕರ್ನಾಟಕ ರಾಜ್ಯವನ್ನು ಒಂದು ರಾಜ್ಯ ಹಲವು ಜಗತ್ತುಗಳೆಂಬ ಹೆಗ್ಗಳಿಕೆಯಿಂದ ಕರೆಯಲ್ಪಡುತ್ತದೆ. ರಾಜ್ಯದಲ್ಲಿ ಕನ್ನಡ ಭಾಷೆಯ ಪ್ರಧಾನ ಭಾಷೆಯಾದರೂ ಕನ್ನಡ ನಾಡಿನಲ್ಲಿ ವಾಸಿಸುವ ಹಲವು ಸಮುದಾಯಗಳು ತಮ್ಮ ಸಂಸ್ಕೃತಿ, ಕಲೆ ಮತ್ತು ವೃತ್ತಿ ಆಧಾರದ ಮೇಲೆ ಸ್ಥಳೀಯ ಭಾಷೆಗಳನ್ನು ಬಳಸಿ ಬೆಳೆಸಿದ್ದಾರೆ. ಅದರಲ್ಲಿ ರಾಜ್ಯದ ಕರಾವಳಿ ಜಿಲ್ಲೆಗಳಲ್ಲಿ ಅತಿ ಹೆಚ್ಚಾಗಿ ಮಾತಾನಾಡುವ ತುಳು ಭಾಷೆಯು ಸುಮಾರು 2400 ವರ್ಷಗಳ ಹಿಂದಿನ ಭಾಷೆಯಾಗಿದ್ದು, ರಾಜ್ಯಾದ್ಯಂತ ಸುಮಾರು 30 ಲಕ್ಷಕ್ಕೂ ಹೆಚ್ಚು ಮಾತಾನಾಡುವ ಭಾಷೆಯಾಗಿರುವ ಮತ್ತು ತುಳುಭಾಷೆಯನ್ನು ನಮ್ಮ ರಾಜ್ಯದ ಎರಡನೇ ಭಾಷೆಯನ್ನಾಗಿ ಮಾಡಿ ಹಾಗೆ ಭಾರತದ ಸಂವಿಧಾನದಲ್ಲಿ 8ನೇ ಪರಿಚ್ಛೇದದಲ್ಲಿ ಸೇರ್ಪಡೆ ಮಾಡಿ ಈ ಭಾಷೆಗೆ ಸೂಕ್ತ ಅಧಿಕೃತ ಸ್ಥಾನಮಾನ ನೀಡಬೇಕೆಂದು ಸದನದಲ್ಲಿ ಗಮನ ಸೆಳೆಯಬಯಸುತ್ತೇನೆ.

**ಉತ್ತರ:**

ಸರ್ಕಾರದ ಆದೇಶ ಸಂಖ್ಯೆ:ಕಸಂವಾ 36 ಕೆಓಎಲ್ ಆಕ 2021 ದಿನಾಂಕ:12.01.2023ರ ಆದೇಶದಲ್ಲಿ, ತುಳು ಭಾಷೆಯನ್ನು ಕರ್ನಾಟಕ ರಾಜ್ಯದಲ್ಲಿ 2ನೇ ಅಧಿಕೃತ ಭಾಷೆಯಾಗಿ ಘೋಷಣೆ ಮಾಡುವ ಕುರಿತು ಅಧ್ಯಯನ ನಡೆಸಿ ವರದಿ ನೀಡಲು ಡಾ. ಮೋಹನ ಆಳ್ವ ಇವರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಿ ಆದೇಶಿಸಲಾಗಿರುತ್ತದೆ.

ಸದರಿ ಸಮಿತಿಯು ತುಳು ಭಾಷೆಯ ಸ್ವರೂಪ ಮತ್ತು ಇತಿಹಾಸ, ತುಳು ಸಾಹಿತ್ಯ ಪರಂಪರೆ, ತುಳು ಲಿಪಿ, ಪ್ರಾಚೀನ ತುಳು ಸಾಹಿತ್ಯ, ಆಧುನಿಕ ತುಳು ಸಾಹಿತ್ಯ, ಸಂಸ್ಕೃತಿ, ತುಳು ಶಾಸನಗಳ ಕುರಿತು ಅಧ್ಯಯನ ನಡೆಸಿ ದಿನಾಂಕ:14.02.2023ರಲ್ಲಿ ವರದಿಯನ್ನು ಸಲ್ಲಿಸಿರುತ್ತದೆ.

ಸಮಿತಿಯು ಸಲ್ಲಿಸಿರುವ ವರದಿಯ ಮೇಲೆ ಕಾನೂನು ಇಲಾಖೆಯ ಅಭಿಪ್ರಾಯವನ್ನು ಕೋರಲಾಗಿ, ಕಾನೂನು ಇಲಾಖೆಯ ಈ ಕೆಳಕಂಡಂತೆ ಅಭಿಪ್ರಾಯವನ್ನು ನೀಡಿರುತ್ತದೆ.

"ನಮ್ಮ ಕರ್ನಾಟಕ ರಾಜ್ಯದಲ್ಲಿ ಕನ್ನಡವೇ ಅಧಿಕೃತ ಆಡಳಿತ ಭಾಷೆಯಾಗಿರುತ್ತದೆ. ಅದೇ ರೀತಿ ಇಂಗ್ಲೀಷ್ ಹೆಚ್ಚುವರಿ ಆಡಳಿತ ಭಾಷೆಯಾಗಿರುತ್ತದೆ. ಯಾವುದೇ ರಾಜ್ಯ ಸರ್ಕಾರದ ಒಂದು ಭಾಷೆಯನ್ನು ಆ ರಾಜ್ಯದ ಅಧಿಕೃತ ಭಾಷೆಯೆಂದು ಘೋಷಿಸಲು ಭಾರತ ಸಂವಿಧಾನದ ಅನುಚ್ಛೇದ 345ರಲ್ಲಿ ಅವಕಾಶ ಮಾಡಿಕೊಟ್ಟಿದೆ. ಈ ಪ್ರಕಾರ ಕ್ರಮವಹಿಸುವ ಪೂರ್ವದಲ್ಲಿ ಸದರಿ ರಾಜ್ಯಗಳು ಈ ಬಗ್ಗೆ ಕಾನೂನಾತ್ಮಕವಾಗಿ ಸಮಿತಿಗಳನ್ನು ರಚನೆ ಮಾಡಿ ಮತ್ತು ವರದಿಯನ್ನು ಪಡೆದುಕೊಂಡು

...2

ಆನಂತರ ಮುಂದುವರೆಯಬಹುದಾಗಿರುತ್ತದೆ. ಅದೇ ರೀತಿ ತುಳು ಭಾಷೆಯನ್ನು ರಾಜ್ಯದ ಅಧಿಕೃತ ಭಾಷೆಯೆಂದು ಘೋಷಿಸುವ ಬಗ್ಗೆ ಆಡಳಿತ ಇಲಾಖೆಯು ಭಾರತ ಸಂವಿಧಾನದ ಅನುಚ್ಛೇದ 345ರ ಪ್ರಕಾರ ಕ್ರಮವಹಿಸಬಹುದಾಗಿರುತ್ತದೆ ಮತ್ತು ಈ ರೀತಿ ಕ್ರಮವಹಿಸುವ ಪೂರ್ವದಲ್ಲಿ ಸದರಿ ಭಾಷೆಗೆ ಸಂಬಂಧಿಸಿದಂತೆ, ಸೂಕ್ತವಾದ ಅಧ್ಯಯನವನ್ನು ಮಾಡಲು ಸಮಿತಿಯನ್ನು ರಚಿಸಿ, ಸದರಿ ಸಮಿತಿಯ ವರದಿಯ ಆಧಾರದ ಮೇರೆಗೆ ಹಾಗೂ ವಿವಿಧ ರಾಜ್ಯಗಳಲ್ಲಿ ಎರಡನೇ ಭಾಷೆಯನ್ನು ಅಧಿಕೃತ ಭಾಷೆಯೆಂದು ಘೋಷಿಸಿರುವ ಬಗ್ಗೆ ಅಧ್ಯಯನ ನಡೆಸಿ, ಅನಂತರ ಸೂಕ್ತವಾಗಿ ಮುಂದುವರಿಯ ಬಹುದಾಗಿರುತ್ತದೆ ".

ಕಾನೂನು ಇಲಾಖೆಯ ಅಭಿಪ್ರಾಯದಂತೆ, ಬೇರೆ ಬೇರೆ ರಾಜ್ಯಗಳಲ್ಲಿ ಅಲ್ಲಿನ ಅಧಿಕೃತ ಭಾಷೆಗಳೊಂದಿಗೆ, ಇತರೆ ಭಾಷೆಗಳನ್ನು ಅಧಿಕೃತ ಭಾಷೆಗಳೆಂದು ಘೋಷಿಸಿರುವ ಬಗ್ಗೆ ಮಾಹಿತಿ ಪಡೆಯಲು ಕ್ರಮವಹಿಸಲಾಗಿದ್ದು, ಮಾಹಿತಿ ಸ್ವೀಕೃತವಾದ ನಂತರ ಪರಿಶೀಲಿಸಿ, ನಿಯಮಾನುಸಾರ ಕ್ರಮವಹಿಸಲಾಗುವುದು.

**ಸಂಖ್ಯೆ.ಕಸಂವಾ 27 ಕೆಟಿಎಲ್ ಆಕ 2024**

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು